# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 15.10.2011**

ಮೆಟ್ರೋ ರೈಲು ಉದ್ಘಾಟನೆ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ಮಹಾತ್ಮಗಾಂಧಿ ರಸ್ತೆ ನಿಲ್ದಾಣದಿಂದ ಬೈಯಪ್ಪನಹಳ್ಳಿ ನಿಲ್ದಾಣದವರೆಗೂ ಮೆಟ್ರೋ ಮಾರ್ಗದಲ್ಲಿ ಬರುವ ರಸ್ತೆಗಳು ಮತ್ತು ಸಂಪರ್ಕ ರಸ್ತೆಗಳ ಪರಿಶೀಲನೆ ನಡೆಸಿದರು.

ಕಳೆದ ಎರಡು ವಾರಗಳಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಮೆಟ್ರೋ ಮಾರ್ಗಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳ, ಪಾದಚಾರಿ ಮಾರ್ಗಗಳ ಮತ್ತು ಜಂಕ್ಷನ್‌ಗಳ ಅಭಿವೃದ್ಧಿ ಮಾಡಲಾಗುತ್ತಿದೆ. ಎಂ.ಜಿ. ರಸ್ತೆಯಿಂದ ಟ್ರಿನಿಟಿ ಸರ್ಕಲ್‌ವರೆಗಿನ ರಸ್ತೆ, ಕಬ್ಬನ್ ರಸ್ತೆ ಮತ್ತು ಸ್ಯಾಂಕಿ ರಸ್ತೆಗಳಲ್ಲಿ ಗಿಡಗಳನ್ನು ನೆಡುವ ಮತ್ತು ಕರ್ಬ್ ಸ್ಟೋನ್‌ಗಳಿಗೆ ಪೈಂಟಿಂಗ್ ಮಾಡುವ ಕೆಲಸ ರಭಸದಿಂದ ಸಾಗುತ್ತಿದೆ. ಪಾದಚಾರಿ ಮಾರ್ಗಗಳ ಮೇಲಿರುವ ಕಲ್ಲು ಮಣ್ಣಿನ ರಾಶಿ, ಕಸ ಮುಂತಾದವುಗಳನ್ನು ಸ್ವಚ್ಛಗೊಳಿಸಿ, ಪಾದಚಾರಿಗಳ ಓಡಾಟಕ್ಕೆ ಅನುಕೂಲ ಮಾಡಿಕೊಡಲಾಗುತ್ತಿದೆ ಎಂದು ಆಯುಕ್ತರು ತಿಳಿಸಿದರು.

ಟ್ರಿನಿಟಿ ವೃತ್ತ, ಸಿ.ಎಂ.ಹೆಚ್. ರಸ್ತೆ ಮತ್ತು ಎಂ.ಜಿ. ರಸ್ತೆಗಳಲ್ಲಿ ರಸ್ತೆ ಡಾಂಬರೀಕರಣ ಮಾಡಲಾಗುತ್ತಿದ್ದು, ಇನ್ನು 2-3 ದಿನಗಳಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು. ಟ್ರಿನಿಟಿ ವೃತ್ತದಲ್ಲಿ ಮ್ಯಾನ್‌ಹೋಲ್‌ನಿಂದ ಕೊಳಚೆ ನೀರು ಉಕ್ಕಿ ಹರಿದು ರಸ್ತೆ ಸಂಪೂರ್ಣವಾಗಿ ಹದಗೆಟ್ಟಿತ್ತು. ನೀರಿನ ಹರಿವಿಗಾಗಿ ಪ್ರತ್ಯೇಕ ಪೈಪ್ ಅಳವಡಿಸಿ ರಸ್ತೆ ಅಭಿವೃದ್ಧಿಪಡಿಸಲಾಗಿದೆ. ಇದರಿಂದ ವಾಹನ ಸಂಚಾರ ಸುಗಮಗೊಂಡು, ರೈಲ್ವೆ ನಿಲ್ದಾಣಗಳಿಗೆ ತ್ವರಿತವಾಗಿ ತಲುಪಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಮೆಟ್ರೊ ಮಾರ್ಗದಲ್ಲಿ ಬರುವ ಕೆಲವು ಪ್ರಮುಖ ರಸ್ತೆಗಳಲ್ಲಿ ಸುಂದರವಾಗಿ ಕಾಣುವಂತೆ ರಿಫ್ಲೆಕ್ಟರ್‌ಗಳನ್ನು ಹೊಂದಿರುವ ರಸ್ತೆ ನಾಮಫಲಕಗಳನ್ನು ಕೂಡ ಹಾಕಲಾಗುತ್ತಿದೆ. ಮಹಾತ್ಮಗಾಂಧಿ ರಸ್ತೆಯಲ್ಲಿ ಹಾಕಿರುವ ಮಾದರಿಯಲ್ಲಿ ಮೆಟ್ರೊ ಸಂಪರ್ಕ ರಸ್ತೆಗಳಲ್ಲಿ ಕೂಡ ಅಳವಡಿಸಲಾಗುವುದೆಂದು ತಿಳಿಸಿದರು.

ತದನಂತರ ಆಯುಕ್ತರು ಮಾಣಿಕ್‌ಷಾ ಪೆರೇಡ್ ಮೈದಾನಕ್ಕೆ ಭೇಟಿ ನೀಡಿ, ಪಾಲಿಕೆಯಿಂದ ಮೈದಾನ ಸ್ವಚ್ಛಗೊಳಿಸುವ, ಆಸನಗಳನ್ನು ಹಾಕಲು ನೆಲವನ್ನು ಸಮತಟ್ಟಾಗಿ ಮಾಡುವ, ಶೌಚಾಲಯದ ವ್ಯವಸ್ಥೆ, ಕುಡಿಯುವ ನೀರು ಒದಗಿಸಲು ಮಾಡಿಕೊಳ್ಳಲಾದ ವ್ಯವಸ್ಥೆಯನ್ನು ಪರಿಶೀಲಿಸಿ, ಪೂರ್ವ ವಲಯದ ಅಧಿಕಾರಿಗಳಿಗೆ ಸೂಚನೆ ನೀಡಿ, ಕಾರ್ಯಕ್ರಮಕ್ಕೆ ಅವಶ್ಯಕವಾದ ಎಲ್ಲಾ ಸಹಕಾರವನ್ನು ನೀಡುವಂತೆ ಸೂಚನೆ ನೀಡಿದರು.

ತಪಾಸಣೆ ಸಂದರ್ಭದಲ್ಲಿ ಪೂರ್ವ ವಲಯದ ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು, ಪ್ರಧಾನ ಅಭಿಯಂತರರು ಹಾಗೂ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**